ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

6

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ - ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE 22/6/2020

# ವಿಶ್ವನಾಥ್ ನಾಮನಿರ್ದೇಶನಕ್ಕೆ ಸುಪ್ರೀಂಕೋರ್ಟ್ ತೀರ್ಪು ಅಡ್ಡಿ?

## ಚುನಾವಣೆಯಲ್ಲಿ ಆಯ್ಕೆಯಾದರಷ್ಟೇ ಸಚಿವ ಸ್ಥಾನ



ಬೆಂಗಳೂರು: ಮಾಜಿ ಸಚಿವ ಎಚ್.ವಿಶ್ವನಾಥ್ ಅವರನ್ನು ಸಾಹಿತ್ಯ ಕ್ಷೇತ್ರದ ಕೋಟಾದಡಿ ವಿಧಾನಪರಿಷತ್‌ಗೆನಾಮನಿರ್ದೇಶನಮಾಡಲುಅನರ್ಹತೆಕುರಿತಂತೆಸುಪ್ರೀಂಕೋರ್ಟ್ ನೀಡಿದ ತೀರ್ಪು ಅಡ್ಡಿಯಾಗಲಿದೆ ಎಂದು ಕಾನೂನು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಶಾಸಕರಾಗಿದ್ದ ವಿಶ್ವನಾಥ್‌ರನ್ನು ಪಕ್ಷಾಂತರ ನಿಷೇಧ ಕಾಯ್ದೆಯಡಿ ಸ್ಪೀಕರ್ ಆಗಿದ್ದ ರಮೇಶ್ ಕುಮಾರ್ ಅನರ್ಹತೆ ಮಾಡಿ ಮುಂದಿನ ವಿಧಾನಸಭೆಯ ಚುನಾವಣೆಯವರೆಗೂ ಚುನಾವಣೆಗೆ ಸ್ಪರ್ಧಿಸದಂತೆ ಆದೇಶಿಸಿದ್ದರು. ಆ ಆದೇಶವನ್ನು ಪ್ರಶ್ನಿಸಿ ವಿಶ್ವನಾಥ್ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಸುಪ್ರೀಂ ಅನರ್ಹತೆ ಆದೇಶವನ್ನು ಎತ್ತಿಹಿಡಿದು, ಉಪ ಚುನಾವಣೆಗೆ ಸ್ಪರ್ಧಿಸಲು ವಿಶ್ವನಾಥ್ ಅವರಿಗೆ ಅವಕಾಶ ಮಾಡಿಕೊಟ್ಟಿತು. ಇದೀಗ ವಿಶ್ವನಾಥ್ ಅವರನ್ನು ವಿಧಾನಪರಿಷತ್‌ಗೆ ಸಾಹಿತ್ಯ ಕ್ಷೇತ್ರದ ಕೋಟಾದಡಿ ನಾಮನಿರ್ದೇಶನ ಮಾಡಲಾಗುತ್ತದೆ ಎಂಬ ಮಾತು ಕೇಳಿಬಂದಿದೆ. ಆದರೆ, ಅನರ್ಹತೆಗೆ ಗುರಿಯಾಗಿ ಆ ಆದೇಶವನ್ನು ಸುಪ್ರೀಂಕೋರ್ಟ್ ಎತ್ತಿಹಿಡಿದಿರುವಾಗ ರಾಜ್ಯಪಾಲರು ವಿಧಾನ ಪರಿಷತ್‌ಗೆ ನಾಮನಿರ್ದೇಶನ ಮಾಡಲು ಸಾಧ್ಯವಿಲ್ಲ. ಅದಕ್ಕೆ ಸುಪ್ರೀಂಕೋರ್ಟ್‌ನ ತೀರ್ಪು ಅಡ್ಡಿಯಿರುತ್ತದೆ ಎಂದು ಕಾನೂನು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.